**ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್ ಸಿ, ಹುಬ್ಬಳ್ಳಿ.**

**C.C. - 35-24** **ಪಿಡಬ್ಲ್ಯೂ: 3**

**ಸಿಡಬ್ಲ್ಯೂ: 8**

ಸಾಕ್ಷಿದಾರರ ಹೆಸರು : ಮಹೇಶ ಗುಡೂರ

ತಂದೆ ಹೆಸರು : ರಾಮಪ್ಪ

ವಯಸ್ಸು : 45 ವರ್ಷ

ಉದ್ಯೋಗ : ಆಟೋ ಚಾಲಕ

ವಾಸಸ್ಥಳ : ಹುಬ್ಬಳ್ಳಿ

**ಸತ್ಯ ಪ್ರತಿಜ್ಞೆ ಮೇರೆಗೆ ದಿನಾಂಕ: 28.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ನನಗೆ ಆರೋಪಿ ಪರಿಚಯವಿಲ್ಲ. ಪ್ರಕರಣದ ಗಾಯಾಳು ಗರೀಬಪ್ಪ ಪರಿಚಯವಿಲ್ಲ. ನಾನು ಅಪಘಾತ ನೋಡಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿಲ್ಲ. ನಾನು ಹೇಳಿಕೆಗಳನ್ನು ಹಾಗೂ ಮರು ಹೇಳಿಕೆಗಳನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದರು, ಅವರ ಮನವಿಯನ್ನು ಪರಿಗಣಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲು: ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ದಿ: 2.11.2023 ರಂದು ರಾತ್ರಿ 9 ಗಂಟೆಗೆ ನನ್ನ ಆಟೋ ರಿಕ್ಷಾವನ್ನು ಸುಳ್ಳ ರೋಡ ಮನೋಜ ಪಾರ್ಕ್ ಬಳಿ ಆಟೋ ಸ್ಟ್ಯಾಂಡ ಬಳಿ ಆಟೋವನ್ನು ನಿಲ್ಲಿಸಿಕೊಂಡು ನಿಂತಿದ್ದಾಗ ನ್ಯಾಯಾಲಯದ ಮುಂದಿರುವ ಆರೋಪಿ ಸುಳ್ಳ-ರೋಡ ರೇಲ್ವೆ ಬ್ರಿಡ್ಜ ಕಡೆಯಿಂದ ರಮೇಶ ಭವನದ ಕಡೆಗೆ ತನ್ನ ಆಟೋವನ್ನು ಅತಿ ವೇಗ ಹಾಗೂ ಅಜಾರೂಕತೆಯಿಂದ ಚಲಾಯಿಸಿಕೊಂಡು ಬಂದು, ವೇಗ ನಿಯಂತ್ರಿಸಲಾಗದೆ, ರಸ್ತೆ ದಾಟುತ್ತಿದ್ದ ಗರೀಬಪ್ಪ ತಂದೆ: ದುರ್ಗಪ್ಪ ಹರಿಜನ ರವರಿಗೆ ಡಿಕ್ಕಿಪಡಿಸಿ ರಸ್ತೆ ಮೇಲೆ ಬೀಳಿಸಿ ತಲೆ ಹಾಗೂ ಮೈಕೈಗೆ ಗಂಭೀರ ಸ್ವರೂಪದ ಗಾಯಪಡಿಸಿ ಕಿಮ್ಸ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ನೀಡಿಸದೇ, ಆವರಣದಲ್ಲಿ ಇಳಿಸಿ ವಾಪಸ್ ಹೋಗಿದ್ದು, ನಂತರ ಸದರಿ ಗಾಯಾಳು ಚಿಕಿತ್ಸೆ ಫಲಕಾರಿಯಾಗದೇ ಮರಣ ಹೊಂದುವಂತೆ ಅಪಘಾತ ಪಡಿಸಿದ್ದಾನೆ ಅಂದರೆ ಸರಿಯಲ್ಲ.

ಈ ಕುರಿತು ನಾನು ನನಗೆ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಅಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು ನಿಪಿ.7 ಎಂದು ಗುರುತಿಸಲಾಯಿತು. ದಿಃ 12.11.2023 ರಂದು ಗಾಯಾಳು ಮೃತಪಟ್ಟ ಕುರಿತು ಈಗ ನನಗೆ ಓದಿ ಹೇಳಿದಂತೆ ಮರು ಹೇಳಿಕೆ ನೀಡಿದ್ದೇನೆ ಅಂದರೆ ಸರಿಯಲ್ಲ. ಸದರಿ ಮರು ಹೇಳಿಕೆ ಭಾಗವನ್ನು ನಿಪಿ.8 ಎಂದು ಗುರುತಿಸಲಾಯಿತು. ನಾನು ಅಪಘಾತ ನೋಡಿದ್ದರೂ ನಿಪಿ.7 ಹಾಗೂ 8 ರಲ್ಲಿರುವ ಎಲ್ಲಾ ಸಂಗತಿಗಳು ಗೊತ್ತಿದ್ದರೂ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಏನೂ ಇಲ್ಲ.**

**ಮರು ವಿಚಾರಣೆಃ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೆ.ಸ.ಎ. ಒಪ್ಪಿಕೊಳ್ಳಲಾಯಿತು.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ, ಹುಬ್ಬಳ್ಳಿ.